		ಗಂಗಾವತಿ ತಾಲೂಕ			
1	ಹುಲಿಹೈದರ	ಹುಲಿಹೈದರ ಗ್ರಾಮದಲ್ಲಿ ಪ್ರಾಥಮಿಕ ಶಾಲೆಗ ಮಳೆನೀರು ಕೊಯಿಲು ಮಾಡುವುದು	5.00	5.00	ಕಾಮಗಾರಿ ಪೂರ್ಣಗೊಂಡಿದೆ
2	ಕಾರಟಗಿ	ಕಾರಟಗಿ ಗ್ರಾಮದಲ್ಲಿ ಪ್ರಾಥಮಿಕ ಶಾಲೆಗೆ ಮಳೆನೀರು ಕೊಯಿಲು ಮಾಡುವುದು	5.00	5.00	ಕಾಮಗಾರಿ ಪೂರ್ಣಗೊಂಡಿದೆ
3	ಸಿದ್ದಾಪೂರ	ಸಿದ್ದಾಪೂರ ಗ್ರಾಮದಲ್ಲಿ ಪ್ರಾಥಮಿಕ ಶಾಲೆಗೆ ಮಳೆನೀರು ಕೊಯಿಲು ಮಾಡುವುದು	5.00	5.00	ಕಾಮಗಾರಿ ಪೂರ್ಣಗೊಂಡಿದೆ
4	ಕನಕಗಿರಿ	ಕನಕಗಿರಿ ಗ್ರಾಮದಲ್ಲಿ ಪ್ರಾಥಮಿಕ ಶಾಲೆಗೆ ಮಳೆನಿರು ಕೊಯಿಲು ಮಾಡುವುದು	2.00	0.00	ಭೌತಿಕವಾಗಿ ಕಾಮಗಾರಿ ಪೂರ್ಣಗೊಂಡಿದೆ
5	ಬೂದಗುಂಪಾ	ಬೂದಗುಂಪಾ ಗ್ರಾಮದಲ್ಲಿ ಪ್ರಾಥಮಿಕ ಶಾಲೆಗೆ ಮಳೆನೀರು ಕೊಯಿಲು ಮಾಡುವುಯ	2.00	0.00	ಭೌತಿಕವಾಗಿ ಕಾಮಗಾರಿ ಪೂರ್ಣಗೊಂಡಿದೆ
6	ಬಸಾಪಟ್ಟಣ	ಬಸಾಪಟ್ಟಣ ಗ್ರಾಮದಲ್ಲಿ ಪ್ರಾಥಮಿಕ ಶಾಲೆಗೆ ಮಳೆನೀರು ಕೊಯಿಲು ಮಾಡುವುದು	2.00	0.00	ಭೌತಿಕವಾಗಿ ಕಾಮಗಾರಿ ಪೂರ್ಣಗೊಂಡಿದೆ
7	ಶ್ರೀರಾಮನಗರ	ಶ್ರೀರಾಮನಗರ ಗ್ರಾಮದಲ್ಲಿ ಪ್ರಾಥಮಿಕ ಶಾಲೆಗೆ ಮಳೆನೀರು ಕೊಯಿಲು ಮಾಡುವುದು	2.00	0.00	ಭೌತಿಕವಾಗಿ ಕಾಮಗಾರಿ ಪೂರ್ಣಗೊಂಡಿದೆ
1	ಊಳೇಸೂರ	ಊಳೇಸೂರ ಗ್ರಾಮದಲ್ಲಿ ಪ್ರಾಥಮಿಕ ಶಾಲೆಗೆ ಮಳೆನೀರು ಕೊಯಿಲು ಮಾಡುವುದು	2.00	0.00	ಭೌತಿಕವಾಗಿ ಕಾಮಗಾರಿ ಪೂರ್ಣಗೊಂಡಿದೆ
		ಒಟ್ಟು	25.00	15.00	
		ಸಮಗ್ರ ಒಟ್ಟು	75.70	23.70	

ರಾಜ್ಯದಲ್ಲಿ ಹೊಸದಾಗಿ ಮದ್ಯದಂಗಡಿ ತೆರೆಯುವ ಅನುಮತಿ

859 (1149) ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ): ಮಾನ್ಯ ಅಬಕಾರಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿ ಹೊಸದಾಗಿ ಮದ್ಯದಂಗಡಿಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಹೊಸದಾಗಿ ತೆರೆಯುವ ಮದ್ಯದಂಗಡಿಗಳನ್ನು ಎಂ.ಎಸ್.ಐ.ಎಲ್.ನವರ ಉಸ್ತುವಾರಿಯಲ್ಲಿಯೇ ತೆರೆಯಲಾಗುವುದೇ?

ಇ) ಹಾಗಿಲ್ಲದಿದ್ದಲ್ಲಿ, ಸರ್ಕಾರ ಖಾಸಗಿಯವರಿಗೆ ಹೊಸದಾಗಿ ಮದ್ಯದಂಗಡಿಗಳನ್ನು ತೆರೆಯಲು ಅನುಮತಿ ನೀಡುವುದೇ?

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬಕಾರಿ ಸಚಿವರು):

ಅ) ಇಲ್ಲ

ಆ) ಸರ್ಕಾರದ ಪತ್ರ ಸಂ: ಎಫ್‌ಡಿ/3/ಇಎಫ್‌ಎಲ್/2008 ದಿನಾಂಕ: 03–07–2009ರಲ್ಲಿ ಎಂ.ಎಸ್.ಐ.ಎಲ್ ಸಂಸ್ಥೆಗೆ 463 ಚಿಲ್ಲರೆ ಮದ್ಯ ಮಾರಾಟದ ಸನ್ನದುಗಳನ್ನು ಮಂಜೂರು ಮಾಡಲು ಅನುಮತಿ ನೀಡಿರುತ್ತದೆ. ಈ ಪೈಕಿ ದಿನಾಂಕ: 03–03–2011ರವರೆಗೆ 205 ಸನ್ನದುಗಳನ್ನು ಮಂಜೂರು ಮಾಡಲಾಗಿರುತ್ತದೆ. ಉಳಿದ 258 ಸನ್ನದುಗಳನ್ನು ಮಂಜೂರು ಮಾಡುವುದು ಬಾಕಿ ಇರುತ್ತದೆ.

ಇ) ಉದ್ಭವಿಸುವುದಿಲ್ಲ.

ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ

860 (781) ಶ್ರೀ ಮುನಿಯಪ್ಪ ವಿ. (ಶಿಡ್ಲಘಟ್ಟ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಶಿಡ್ಲಘಟ್ಟ ಕ್ಷೇತ್ರದಲ್ಲಿ ಕಳೆದ ಒಂದು ವರ್ಷದಿಂದ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಎಷ್ಟು ಕೊಳವೆ ಬಾವಿಗಳನ್ನು

ಕೊರೆಯಲಾಗಿದೆ; ಆ ಪೈಕಿ ಎಷ್ಟು ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಹಾಗೂ ಮೋಟಾರ್ ಪಂಪ್ ಅಳವಡಿಸಿ ನೀರು ಒದಗಿಸಲಾಗಿದೆ;

ಇ) ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ಮತಕ್ಷೇತ್ರದ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಬರುವ ಬಹಳಷ್ಟು ರಸ್ತೆಗಳು ಸಂಚಾರಕ್ಕೆ ಯೋಗ್ಯವಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ 15–20 ವರ್ಷಗಳ ಹಿಂದೆ ಮಾಡಿರುವ ಡಾಂಬರ್ ರಸ್ತೆಗಳ ದುರಸ್ತಿಗೆ ಸರ್ಕಾರ ಏನಾದರೂ ವಿಶೇಷ ಕ್ರಮ ತೆಗೆದುಕೊಂಡಿದೆಯೇ;

ಈ) ರಾಜ್ಯದಲ್ಲಿ ಈ ರಸ್ತೆಗಳ ದುರಸ್ತಿಗೆ ವಿವಿಧ ಲೆಕ್ಕಶೀರ್ಷಿಕೆಗಳ ಯೋಜನೆಯಲ್ಲಿ ಬಿಡುಗಡೆಯಾಗಿರುವ ಹಣವೆಷ್ಟು (ಕ್ಷೇತ್ರವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು)?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು):

ಅ) ಬಂದಿದೆ.

ಆ) ಶಿಡ್ಲಘಟ್ಟ ಕ್ಷೇತ್ರದಲ್ಲಿ ಕಳೆದ ಒಂದು ವರ್ಷದಿಂದ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು 20 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ. ಆ ಪೈಕಿ 9 ಕೊಳವೆ ಬಾವಿಗಳಿಗೆ ಪಂಪು ಮೋಟಾರ್ ಮತ್ತು ವಿದ್ಯುತ್ ಸಂಪರ್ಕ ಅಳವಡಿಸಿ ನೀರು ಸರಬರಾಜು ಮಾಡಲಾಗಿದೆ.

ಇ) ಬಂದಿದೆ. ದುರಸ್ತಿಗೊಳಗಾಗಿರುವ ರಸ್ತೆಗಳ ಸುಧಾರಣೆಗಾಗಿ ಮತ್ತು ಅಭಿವೃದ್ಧಿಗಾಗಿ 201–11ರ ಸಾಲಿನ ಕ್ರಿಯಾ ಯೋಜನೆಯಡಿ ವಿವಿಧ ಲೆಕ್ಕ ಶೀರ್ಷಿಕೆಗಳಡಿ ರೂ. 3.059 ಕೋಟಿ ಅನುದಾನವನ್ನು ಶಿಡ್ಲಘಟ್ಟ ಮತಕ್ಷೇತ್ರಕ್ಕೆ ಒದಗಿಸಲಾಗಿದೆ.

ಈ) ರಾಜ್ಯದಲ್ಲಿ ಗ್ರಾಮೀಣ ರಸ್ತೆಗಳ ನಿರ್ವಹಣೆ, ದುರಸ್ತಿ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ಜಿಲ್ಲಾವಾರು ಬಿಡುಗಡೆಯಾಗಿರುವ ಅನುದಾನದ ವಿವರಗಳನ್ನು ಅನುಬಂಧ–1 ರಲ್ಲಿ ನೀಡಿದೆ.